**Akashvani : Bangalore**
**National Bulletin In Kannada**
**08.06.2024 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

೧. ನಿಯೋಜಿತ ಪ್ರಧಾನಮಂತ್ರಿ ನರೇಂದ್ರ ಮೋದಿ ನಾಳೆ ಪ್ರಮಾಣವಚನ ಸ್ವೀಕಾರ; ರಾಷ್ಟ್ರಪತಿ ಭವನದಲ್ಲಿ ಭರದ ಸಿದ್ಧತೆ

೨. ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸಲು ವಿದೇಶಿ ಗಣ್ಯರಿಗೆ ಆಹ್ವಾನ; ನವದೆಹಲಿಗೆ ಬಂದಿಳಿದ ಬಾಂಗ್ಲಾ ಪ್ರಧಾನಿ ಶೇಕ್ ಹಸೀನಾ

೩. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕನ ಪಾತ್ರ ನಿರ್ವಹಿಸಬೇಕೆಂದು ಪಕ್ಷದ ಕಾರ್ಯಕಾರಣಿ ನಿರ್ಣಯ

೪. ನೀಟ್ ಪರೀಕ್ಷೆ ಪ್ರಕ್ರಿಯೆ ಅತ್ಯಂತ ಪಾರದರ್ಶಕ; ಅಭ್ಯರ್ಥಿಗಳ ಅನುಮಾನ ಪರಿಸಲು ಉನ್ನತ ಮಟ್ಟದ ಸಮಿತಿ ರಚನೆ - ಎನ್‌ಟಿಎ ಸ್ಪಷ್ಟನೆ

೫. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ನಾಳೆ ಭಾರತ- ಪಾಕಿಸ್ತಾನ ನಡುವೆ ರೋಚಕ ಹಣಾಹಣಿ

**<><*<><>*><>**

ಕೇಂದ್ರದಲ್ಲಿ ನೂತನ ಸರ್ಕಾರದ ಪ್ರಮಾಣ ವಚನ ಸಮಾರಂಭಕ್ಕೆ ಸಿದ್ಧತೆಗಳು ಭರದಿಂದ ಸಾಗಿವೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ನೂತನ ಸರ್ಕಾರ ರಚನೆ ಮಾಡುವಂತೆ ನಿಯೋಜಿತ ಪ್ರಧಾನಿ ನರೇಂದ್ರ ಮೋದಿ ಅವರನ್ನು ಆಹ್ವಾನಿಸಿದ್ದಾರೆ. ಪ್ರಮಾಣ ವಚನ ಸಮಾರಂಭ ನಾಳೆ ರಾತ್ರಿ ೭ ಗಂಟೆ ೧೫ ನಿಮಿಷಕ್ಕೆ ರಾಷ್ಟ್ರಪತಿ ಭವನದಲ್ಲಿ ನಡೆಯಲಿದೆ. ರಾಷ್ಟ್ರಪತಿ ಅವರು, ನರೇಂದ್ರ ಮೋದಿ ಹಾಗೂ ಕೇಂದ್ರ ಸಚಿವ ಸಂಪುಟದ ಸದಸ್ಯರಿಗೆ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣವಚನವನ್ನು ಬೋಧಿಸಲಿದ್ದಾರೆ. ನರೇಂದ್ರ ಮೋದಿ ಅವರು, ನಿನ್ನೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿದ್ದರು ಮತ್ತು ನೂತನ ಸರ್ಕಾರ ರಚನೆಗೆ ಅವಕಾಶ ನೀಡುವಂತೆ ಹಕ್ಕು ಮಂಡಿಸಿದ್ದರು. ಇದಕ್ಕೂ ಮುನ್ನ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ನೇತೃತ್ವದ ಎನ್‌ಡಿಎ ನಿಯೋಗ, ರಾಷ್ಟ್ರಪತಿ ಅವರನ್ನು ಭೇಟಿ ಮಾಡಿ. ಬಿಜೆಪಿ ಸಂಸದೀಯ ಪಕ್ಷದ ನಾಯಕರನ್ನಾಗಿ ನರೇಂದ್ರ ಮೋದಿ ಅವರನ್ನು ಆಯ್ಕೆ ಮಾಡಿರುವ ಕುರಿತ ಪತ್ರವನ್ನು ಸಲ್ಲಿಸಿದ್ದರು. ನರೇಂದ್ರ ಮೋದಿ ಅವರ ನಾಯಕತ್ವಕ್ಕೆ ಬೆಂಬಲಿಸಿರುವ ಎನ್‌ಡಿಎ ಮಿತ್ರಪಕ್ಷಗಳು ನೀಡಿರುವ ಪತ್ರಗಳನ್ನು ರಾಷ್ಟ್ರಪತಿಯವರಿಗೆ ಸಲ್ಲಿಸಲಾಯಿತು. ರಾಷ್ಟ್ರಭವನದ ಮುಂದೆ ಮಾತನಾಡಿದ ನರೇಂದ್ರ ಮೋದಿ, ಎನ್‌ಡಿಎ ಮೈತ್ರಿಕೂಟ ಸದೃಢ, ಸ್ಥಿರ ಹಾಗೂ ಪ್ರಗತಿಪರ ಸರ್ಕಾರವನ್ನು ನೀಡಲಿದೆ. ರಾಷ್ಟ್ರಪತಿ ಅವರು ತಮ್ಮನ್ನು ನಿಯೋಜಿತ ಪ್ರಧಾನಮಂತ್ರಿಯಾಗಿ ನೇಮಕ ಮಾಡಿದ್ದಾರೆ ಎಂದರು. ನರೇಂದ್ರ ಮೋದಿ ಅವರು, ಪ್ರಧಾನಮಂತ್ರಿಯಾಗಿ ಸತತ ಮೂರನೇ ಬಾರಿಗೆ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಇತ್ತೀಚಿಗೆ ನಡೆದ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ೨೯೩ ಸ್ಥಾನಗಳಲ್ಲಿ ಗೆಲುವು

ಸಾಧಿಸಿದ್ದು, ೫೪೩ ಸದಸ್ಯ ಬಲದ ಲೋಕಸಭೆಯಲ್ಲಿ ಸ್ಪಷ್ಟ ಬಹುಮತ ಗಳಿಸಿದೆ. ನರೇಂದ್ರ ಮೋದಿ ಅವರ ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ನೆರೆಹೊರೆ ರಾಷ್ಟ್ರಗಳ ಹಲವು ನಾಯಕರನ್ನು ಆಹ್ವಾನಿಸಲಾಗಿದೆ. ಆಹ್ವಾನಿತ ನಾಯಕರು ಈಗಾಗಲೇ ನವದೆಹಲಿಗೆ ಆಗಮಿಸುತ್ತಿದ್ದಾರೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.  ಶ್ರೀಲಂಕಾದ ಅಧ್ಯಕ್ಷ ರಾಣಿಲ್ ವಿಕ್ರಮ ಸಿಂಘೆ, ಮಾಲ್ಡೀವ್ಸ್ ಅಧ್ಯಕ್ಷ ಡಾ.ಮೊಹಮ್ಮದ್ ಮುಯಿಝು, ಬಾಂಗ್ಲಾದೇಶದ ಪ್ರಧಾನಮಂತ್ರಿ ಶೇಖ್ ಹಸೀನ, ಮಾರಿಷಸ್ ಪ್ರಧಾನಿ ಪ್ರವೀಂದ್ ಕುಮಾರ್ ಜುಗ್ನೌತ್, ನೇಪಾಳದ ಪ್ರಧಾನಿ ಪುಷ್ಪಕಮಲ್ ದಹಲ್ ಪ್ರಚಂಡ, ಭೂತಾನ್ ಪ್ರಧಾನಿ ಶೆರಿಂಗ್ ಟೊಬ್ಗೆ ಮತ್ತಿತರರು ಭಾಗವಹಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಪ್ರಮಾಣವಚನ ಸಮಾರಂಭದಲ್ಲಿ ಭಾಗವಹಿಸಲಿರುವ ವಿದೇಶಿ ಗಣ್ಯರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ನಾಳೆ ಸಂಜೆ ಔತಣಕೂಟ ಏರ್ಪಡಿಸಿದ್ದಾರೆ. ಬಿಗಿಬಂದೋಬಸ್ತ್ ಮಾಡಿದ್ದಾರೆ. ಯಾವುದೇ ರೀತಿಯ ಅಹಿತಕರ ಘಟನೆಗಳಿಗೆ ಆಸ್ಪದವಾಗದಂತೆ ಸುರಕ್ಷತೆ ಮತ್ತು ಭದ್ರತೆ ಕಾಯ್ದುಕೊಳ್ಳಲು ಕಠಿಣ ಕ್ರಮಗಳನ್ನು ಕೈಗೊಂಡಿದ್ದಾರೆ. ಪ್ರಮಾಣ ವಚನ ಸ್ವೀಕಾರ ಸಮಾರಂಭದ ಸಂದರ್ಭದಲ್ಲಿ ಬಿಸಿಗಾಳಿ ತುಂಬಿದ ಬಲೂನ್‌ಗಳು, ಪ್ಯಾರಾಗ್ಲೈಡರ್‌ಗಳು, ಮಾನವ ರಹಿತ ವೈಮಾನಿಕ ವಾಹನಗಳ ಹಾರಾಟ ಸೇರಿದಂತೆ ಇನ್ನಿತರ ಹಾರಾಟಗಳನ್ನು ನಿಷೇಧಿಸಲಾಗಿದೆ. ನಿಷೇಧಾಜ್ಞೆ ಮುಂದಿನ ಎರಡು ದಿನಗಳವರೆಗೆ ಜಾರಿಯಲ್ಲಿರುತ್ತದೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಅವರ ಸಚಿವ ಸಂಪುಟದ ಸದಸ್ಯರ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸುವ ಸಲುವಾಗಿ ಬಾಂಗ್ಲಾದೇಶದ ಪ್ರಧಾನಮಂತ್ರಿ ಶೇಕ್ ಹಸೀನಾ ಮತ್ತು ಸೀಶೆಲ್ಸ್‌ನ ಉಪ ರಾಷ್ಟ್ರಪತಿ ಅಹಮ್ಮದ್ ಅಫೀಫ್ ಅವರು ದೆಹಲಿಗೆ ಆಗಮಿಸಿದ್ದಾರೆ. ವಿಮಾನ ನಿಲ್ದಾಣದಲ್ಲಿ ಅವರನ್ನು ವಿದೇಶಾಂಗ ವ್ಯವಹಾರಗಳ ಕಾರ್ಯದರ್ಶಿ ಮುಕ್ತೇಶ್ ಪರ್ದೇಶಿ ಬರ ಮಾಡಿಕೊಂಡರು. ಬಾಂಗ್ಲಾದೇಶದ ಪ್ರಧಾನಿಯವರ ಆಗಮನದ ಹಿನ್ನಲೆಯಲ್ಲಿ ಪ್ರತಿಕ್ರಿಯಿಸಿರುವ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣದೀರ್ ಜೈಸ್ವಾಲ್, ಭಾರತದ ಅತ್ಯಂತ ಮೌಲ್ಯಯುತ ಪಾಲುದಾರರ ಪೈಕಿ ಒಬ್ಬರಾಗಿರುವ ಬಾಂಗ್ಲಾದೇಶದ ಪ್ರಧಾನಿಯವರ ಆಗಮನದಿಂದ ಉಭಯ ದೇಶಗಳ ನಡುವಿನ ಸಂಬಂಧ ಮತ್ತಷ್ಟು ವೃದ್ಧಿಯಾಗಲು ಸಹಕಾರಿಯಾಗಲಿದೆ ಎಂದು ಸಾಮಾಜಿಕ ಮಾಧ್ಯಮದ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

<><*<><>*><>

ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕನ ಪಾತ್ರ ನಿರ್ವಹಿಸುವಂತೆ ರಾಹುಲ್ ಗಾಂಧಿ ಅವರನ್ನು ಮನವಿ ಮಾಡಿಕೊಳ್ಳುವ ಸಂಬಂಧ ಕಾಂಗ್ರೆಸ್ ಕಾರ್ಯಕಾರಿ ಸಮಿತಿ-ಸಿಡಬ್ಲ್ಯುಸಿ ಸರ್ವಾನುಮತದ ನಿರ್ಣಯ ಕೈಗೊಂಡಿದೆ. ದೆಹಲಿಯಲ್ಲಿಂದು ನಡೆದ ಮುಂದುವರೆದ ಸಿಡಬ್ಲ್ಯುಸಿ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಹಿರಿಯ ಕಾಂಗ್ರೆಸ್ ಮುಖಂಡ ಕೆ.ಸಿ.ವೇಣುಗೋಪಾಲ್ ರಾಹುಲ್ ಗಾಂಧಿ ಅವರ ನಾಯಕತ್ವದಲ್ಲಿ ಬಲಿಷ್ಠ ಹಾಗೂ ಜಾಗರೂಕ ಪ್ರತಿಪಕ್ಷ ರೂಪುಗೊಳ್ಳಲಿದೆ ಎಂಬ ವಿಶ್ವಾಸ ಕಾಂಗ್ರೆಸ್ ಕಾರ್ಯಕಾರಿ ಸಮಿತಿಗೆ ಇದೆ ಎಂದು ಹೇಳಿದರು. ಮತ್ತೊಬ್ಬ ಕಾಂಗ್ರೆಸ್ ಹಿರಿಯ ನಾಯಕ ಜೈರಾಮ್ ರಮೇಶ್, ಇತ್ತೀಚಿಗೆ ನಡೆದ ಸಾರ್ವತ್ರಿಕ ಚುನಾವಣೆ ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬಿದೆ. ರಾಜ್ಯಮಟ್ಟದಲ್ಲಿ ಚುನಾವಣೆಯ ಕಾರ್ಯಕ್ರಮತೆಯನ್ನು ಕಾಂಗ್ರೆಸ್ ಸಮಗ್ರ ವಿಶ್ಲೇಷಣೆ ಮಾಡಲಿದೆ ಎಂದು ತಿಳಿಸಿದರು. ಇದಕ್ಕೂ ಮುನ್ನ ಮುಂದುವರೆದ ಕಾಂಗ್ರೆಸ್ ಕಾರ್ಯಕಾರಣಿ ಸಭೆಯಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪ್ರತಿಕೂಲ

ಪರಿಸ್ಥಿತಿಯಲ್ಲೂ ಚುನಾವಣೆಯನ್ನು ಎದುರಿಸಿ, ಜಯಗಳಿಸಿದ ನೂತನ ಕಾಂಗ್ರೆಸ್ ಸಂಸದರನ್ನು ಅಭಿನಂದಿಸಿದರು. ಮಣಿಪುರದಿಂದ ಕಾಂಗ್ರೆಸ್ ಆರಂಭಿಸಿದ ನ್ಯಾಯಾಯಾತ್ರೆಯಿಂದ ಅಲ್ಲಿನ ಎರಡು ಲೋಕಸಭಾ ಕ್ಷೇತ್ರಗಳಲ್ಲೂ ಪಕ್ಷ ಗೆಲುವು ಸಾಧಿಸಿದೆ. ಅಲ್ಲದೆ, ನಾಗಲ್ಯಾಂಡ್, ಅಸ್ಸಾಂ ಮತ್ತು ಮೇಘಾಲಯದಲ್ಲೂ ಪಕ್ಷದ ಅಭ್ಯರ್ಥಿಗಳು ಜಯಗಳಿಸಿದ್ದಾರೆ ಎಂದು ತಿಳಿಸಿದರು. ಪ್ರಜಾಪ್ರಭುತ್ವ ಮತ್ತು ಸಂವಿಧಾನ ರಕ್ಷಣೆಗಾಗಿ ಕಾಂಗ್ರೆಸ್ ಪಕ್ಷಕ್ಕೆ ದೇಶಾದ್ಯಂತ ವ್ಯಾಪಕ ಬೆಂಬಲ ದೊರೆತಿದೆ. ಇಂಡಿ ಒಕ್ಕೂಟದ ಪಾಲುದಾರ ಪಕ್ಷಗಳ ಜೊತೆ ಕಾಂಗ್ರೆಸ್ ಒಗ್ಗೂಡಿ ಸಂಸತ್ತಿನ ಒಳಗೆ ಮತ್ತು ಹೊರಗೆ ಕೆಲಸ ಮಾಡಲಿದೆ ಎಂದರು ಸ್ಪಷ್ಟಪಡಿಸಿದರು. ಸಭೆಯಲ್ಲಿ ಹಿರಿಯ ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಪಕ್ಷದ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಸೇರಿದಂತೆ ಇತರರು ಭಾಗವಹಿಸಿದ್ದರು.

<><*<><>*><>

ಡೆನ್ಮಾರ್ಕ್ ಪ್ರಧಾನಮಂತ್ರಿ ಮೆಟ್ಟೆ ಫೆಡ್ರಿಕ್ ಸೆನ್ ಅವರ ಮೇಲೆ ದಾಳಿಯನ್ನು ನಿಯೋಜಿತ ಪ್ರಧಾನಿ ನರೇಂದ್ರ ಮೋದಿ ಖಂಡಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ಡೆನ್ಮಾರ್ಕ್ ಪ್ರಧಾನಮಂತ್ರಿ ಮೇಲೆ ದಾಳಿ ನಡೆದ ಸುದ್ದಿ ಕೇಳಿ ತೀವ್ರ ಆಘಾತವಾಗಿದೆ ಎಂದು ತಿಳಿಸಿದ್ದಾರೆ. ಡೆನ್ಮಾರ್ಕ್ ಪ್ರಧಾನಿಯವರ ಆರೋಗ್ಯ ಸುಧಾರಣೆಯಾಗಲಿ ಎಂದು ನರೇಂದ್ರ ಮೋದಿ ಆರೈಸಿದ್ದಾರೆ. ಕೇಂದ್ರೀಯ ಕೋಪನ್‌ಹೆಗನ್‌ನಲ್ಲಿ ನಿನ್ನೆ ಸಂಜೆ ಡೆನ್ಮಾರ್ಕ್ ಪ್ರಧಾನಿ ಮೇಲೆ ವ್ಯಕ್ತಿಯೊಬ್ಬ ದಾಳಿ ನಡೆಸಿದ್ದ. ಸುದ್ದಿ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಹೇಳಿಕೆ ಹೊರಬಿದ್ದಿದೆ.

<><*<><>*><>

ಒಡಿಶಾದಲ್ಲಿ ಇದೇ ಮೊದಲ ಬಾರಿಗೆ ಬಿಜೆಪಿಯ ಮುಖ್ಯಮಂತ್ರಿ ಸೋಮವಾರ ಪ್ರಮಾಣವಚನ ಸ್ವೀಕರಿಸಲಿರುವ ಸಮಾರಂಭಕ್ಕೆ ಸಕಲ ಸಿದ್ಧತೆಗಳನ್ನು ಮಾಡಲಾಗುತ್ತಿದೆ. ಅದೇ ದಿನ ಬೆಳಗ್ಗೆ ಬಿಜೆಪಿ ಶಾಸಕಾಂಗ ಪಕ್ಷದ ಸಭೆ ನಡೆಯಲಿದ್ದು, ಆದಾದ ಬಳಿಕ ಭುವನೇಶ್ವರದ ಜನತಾ ಮೈದಾನದಲ್ಲಿ ನೂತನ ಮುಖ್ಯಮಂತ್ರಿ ಪ್ರಮಾಣ ವಚನ ಸ್ವೀಕಾರ ಸಮಾರಂಭ ನಡೆಯಲಿದೆ. ನೂತನ ಮುಖ್ಯಮಂತ್ರಿ ಯಾರೆಂಬದನ್ನು ಬಿಜೆಪಿ ಇನ್ನೂ ಅಂತಿಮಗೊಳಿಸಿಲ್ಲ. ಈ ಬಗ್ಗೆ ದೆಹಲಿಯಲ್ಲಿ ನಡೆಯಲಿರುವ ಬಿಜೆಪಿಯ ಸಂಸದೀಯ ಮಂಡಳಿ ಸಭೆಯಲ್ಲಿ ಅಂತಿಮ ತೀರ್ಮಾನ ಕೈಗೊಳ್ಳುವ ಸಾಧ್ಯತೆಗಳಿರುವುದರಿಂದ ರಾಜಕೀಯ ಚಟುವಟಿಕೆಗಳು ರಾಜಧಾನಿ ದೆಹಲಿಗೆ ವರ್ಗಾವಣೆಗೊಂಡಿವೆ. ೭೮ ಸದಸ್ಯರನ್ನೊಳಗೊಂಡ ಬಿಜೆಪಿ ಶಾಸಕಾಂಗ ಪಕ್ಷದ ಸಭೆ, ಪಕ್ಷದ ಇಬ್ಬರು ಕೇಂದ್ರೀಯ ವೀಕ್ಷಕರ ಸಮ್ಮುಖದಲ್ಲಿ ನಡೆಯಲಿದ್ದು, ಪಕ್ಷದ ನೂತನ ನಾಯಕನ ಆಯ್ಕೆ ಔಪಚಾರಿಕವಾಗಿ ನಡೆಯಲಿದೆ. ಮುಖ್ಯಮಂತ್ರಿ ಹುದ್ದೆಗೆ ಹಲವು ಹೆಸರುಗಳು ಚಾಲ್ತಿಯಲ್ಲಿವೆ. ಈ ಪೈಕಿ ಆರು ಬಾರಿ ಸಂಸದರಾಗಿರುವ ಕೇಂದ್ರದ ಮಾಜಿ ಸಚಿವ ಜ್ಯುಯಲ್ ಒರಮ್, ಹಿರಿಯ ಬಿಜೆಪಿ ನಾಯಕ ಹಾಗೂ ಸಂಸದ ಧರ್ಮೇಂದ್ರ ಪ್ರಧಾನ್, ನೂತನವಾಗಿ ಆಯ್ಕೆಯಾಗಿರುವ ಶಾಸಕರಾದ ಸುರೇಶ್ ಪೂಜಾರಿ, ಮೋಹನ್ ಚರಣ್ ಮಾಝಿ, ಜಮ್ಮು ಮತ್ತು ಕಾಶ್ಮೀರದ ಮಾಜಿ ಲೆಫ್ಟಿನೆಂಟ್ ಗೌರ್ನರ್ ಹಾಗೂ ಭಾರತದ ಸಿಎಜಿ ಆಗಿದ್ದ ಗಿರೀಶ್‌ಚಂದ್ರ ಮುರ್ಮು ಅವರ ಹೆಸರುಗಳು ಪ್ರಮುಖವಾಗಿ ಕೇಳಿಬರುತ್ತಿವೆ.

ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಪ್ರಚಾರ ಸಭೆಗಳಲ್ಲಿ ಪಾಲ್ಗೊಂಡಿದ್ದ ಬಿಜೆಪಿಯ ಹಿರಿಯ ನಾಯಕ ಹಾಗೂ ನಿಯೋಜಿತ ಪ್ರಧಾನಿ ನರೇಂದ್ರ ಮೋದಿ, ಈ ಮಣ್ಣಿನಮಗ ರಾಜ್ಯದ ನೂತನ ಮುಖ್ಯಮಂತ್ರಿಯಾಗಲಿದ್ದಾರೆ ಎಂದು ಭರವಸೆ ನೀಡಿದ್ದರು. ೧೪೭ ಸದಸ್ಯ ಬಲದ ಒಡಿಶಾ ವಿಧಾನಸಭೆ

ಚುನಾವಣೆಯಲ್ಲಿ ಬಿಜೆಪಿ ೭೮ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದೆ. ಉಳಿದಂತೆ ಬಿಜೆಡಿ-೫೧, ಕಾಂಗ್ರೆಸ್-೧೪ ಹಾಗೂ ಇತರರು ೪ ಕ್ಷೇತ್ರಗಳಲ್ಲಿ ಜಯ ಗಳಿಸಿದ್ದಾರೆ.

**<><*<><>*><>**

ದೇಶಾದ್ಯಂತ ನಡೆದ ೨೦೨೪ರ ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆ - ನೀಟ್-ಯುಜಿಯ ಪ್ರಕ್ರಿಯೆ ಅತ್ಯಂತ ಪಾರದರ್ಶಕ ಹಾಗೂ ಸಮಗ್ರವಾಗಿ ನಡೆದಿದೆ. ಈ ವಿಚಾರದಲ್ಲಿ ರಾಜಿ ಮಾಡಿಕೊಂಡಿಲ್ಲ ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ- ಎನ್‌ಟಿಎ ಸ್ಪಷ್ಟಪಡಿಸಿದೆ. ಮೇ ೫ ರಂದು ನಡೆದ ಪರೀಕ್ಷೆಯ ಫಲಿತಾಂಶವನ್ನು ಈ ತಿಂಗಳ ೪ ರಂದು ಪ್ರಕಟಿಸಲಾಗಿತ್ತು. ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಎನ್‌ಟಿಎ ಮಹಾ ನಿರ್ದೇಶಕ ಸುಬೋಧ್ ಕುಮಾರ್ ಸಿಂಗ್, ಪರೀಕ್ಷಾರ್ಥಿಗಳು ಎತ್ತಿರುವ ಹಲವು ಅನುಮಾನಗಳಲ್ಲಿ ಸತ್ಯಾಂಶವಿಲ್ಲ. ಯಾವುದೇ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿಲ್ಲ ಎಂದು ಹೇಳಿದರು. ದೇಶಾದ್ಯಂತ ೪ ಸಾವಿರದ ೭೫೦ ಕೇಂದ್ರಗಳಲ್ಲಿ ನೀಟ್ ಪರೀಕ್ಷೆ ನಡೆದಿದ್ದು, ಈ ಪೈಕಿ ಕೇವಲ ಆರು ಕೇಂದ್ರಗಳಲ್ಲಿ ನಡೆದ ಪರೀಕ್ಷೆಗೆ ಹಾಜರಾಗಿದ್ದ ಅಭ್ಯರ್ಥಿಗಳು ಕೆಲವು ಶಂಕೆಗಳನ್ನು ವ್ಯಕ್ತಪಡಿಸಿದ್ದಾರೆ. ಪ್ರಶ್ನೆ ಪತ್ರಿಕೆ ವಿತರಣೆಯಲ್ಲಿ ಆಗಿರುವ ತಪ್ಪಿನಿಂದಾಗಿ ೧ ಸಾವಿರದ ೬೦೦ ಅಭ್ಯರ್ಥಿಗಳ ಸಮಯ ಹಾಳಾಗಿದೆ. ಈ ಎಲ್ಲ ಅಭ್ಯರ್ಥಿಗಳ ಅನುಮಾನಗಳನ್ನು ವಿಶ್ಲೇಷಿಸಿ, ಪರಿಹರಿಸಲು ಎನ್‌ಟಿಎ ಉನ್ನತ ಮಟ್ಟದ ಸಮಿತಿಯೊಂದನ್ನು ರಚಿಸಿದೆ ಎಂದು ಅವರು ತಿಳಿಸಿದರು.

**<><*<><>*><>**

ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ಟೂರ್ನಿಯಲ್ಲಿ ಡಿ ಗುಂಪಿನ ಪಂದ್ಯದಲ್ಲಿ ಇಂದು ನೆದರ್‌ಲ್ಯಾಂಡ್ಸ್ ಹಾಗೂ ದಕ್ಷಿಣ ಆಫ್ರಿಕಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಬಿ ಗುಂಪಿನ ಮತ್ತೊಂದು ಪಂದ್ಯದಲ್ಲಿಂದು ಆಸ್ಟ್ರೇಲಿಯಾ ಮತ್ತು ಇಂಗ್ಲೆಂಡ್ ಮುಖಾಮುಖಿಯಾಗಲಿದ್ದು, ಪಂದ್ಯ ರಾತ್ರಿ ೧೦.೩೦ ಕ್ಕೆ ಪ್ರಾರಂಭವಾಗಲಿದೆ. ನಾಳೆ ನ್ಯೂಯಾರ್ಕ್‌ನ ನಸ್ಸೌ ಕೌಂಟಿ ಅಂತರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿರುವ ಎ ಗುಂಪಿನ ಎರಡನೇ ಪಂದ್ಯದಲ್ಲಿ ಭಾರತ, ತನ್ನ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ತಂಡವನ್ನು ಎದುರಿಸಲಿದೆ. ಪಂದ್ಯದ ಗೆಲುವಿಗಾಗಿ ಉಭಯ ತಂಡಗಳು ತೀವ್ರ ಪೈಪೋಟಿ ನಡೆಸಲು ಸಿದ್ಧತೆ ಮಾಡಿಕೊಂಡಿವೆ. ಪಂದ್ಯ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ **<>*><>**